# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 38 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 11.08.2025 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಪಡಿತರ ಅಂಗಡಿಗಳಲ್ಲಿ ರಾಜ್ಯ ಸರ್ಕಾರದ ಯೋಜನೆಗಳ ವಿವರಗಳನ್ನು ಪ್ರದರ್ಶಿಸದೇ ಅಲ್ಲಿಯ ಕೆಲಸದವರು ಜನರಿಗೆ ತಪ್ಪು ಸಂದೇಶ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುವುದಿಲ್ಲ. |
| ಆ | ನ್ಯಾಯಬೆಲೆ ಅಂಗಡಿಯಲ್ಲಿ ಕರಾವಳಿ ಭಾಗದಲ್ಲಿ ಕೆಂಪು ಕುಚಲಕ್ಕಿ ನೀಡಬೇಕೆಂಬ ಜನರ ಬೇಡಿಕೆಯನ್ನು ಈಡೇರಿಸಲಾಗಿದೆಯೇ;(ವಿವರ ನೀಡುವುದು) | ಕರಾವಳಿ ಭಾಗದಲ್ಲಿರುವ ನ್ಯಾಯಬೆಲೆ ಅಂಗಡಿಗಳಲ್ಲಿ ಕೆಂಪು ಕುಚ್ಚಲಕ್ಕಿ ಹಂಚಿಕೆ ಮಾಡಲಾಗುತ್ತಿರುವುದಿಲ್ಲ. |
| ಇ | ಎ.ಪಿ.ಎಲ್ ಕಾರ್ಡುದಾರರಿಗೆ ರಾಜ್ಯದಲ್ಲಿ ಅಕ್ಕಿ ನೀಡುತ್ತಿಲ್ಲ ಎಂಬ ದೂರುಗಳಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ರಾಜ್ಯದಲ್ಲಿ 2023-24ರಲ್ಲಿ ಎಷ್ಟು ಬಿಪಿಎಲ್ ಕಾರ್ಡ್ ದಾರರಿಗೆ ಕುಚಲಕ್ಕಿ ನೀಡಲಾಗಿದೆ? (ವಿವರ ನೀಡುವುದು) | ಬಂದಿರುತ್ತದೆ.<br>ಈ ಹಿಂದೆ ಆದ್ಯತೇತರ (NPHH) ಪಡಿತರ ಚೀಟಿಯನ್ನು ಪಡೆದ ಕುಟುಂಬದವರು ತಮಗೆ ಆಹಾರ ಧಾನ್ಯದ ಅಗತ್ಯತೆ ಇದೆ ಎಂದು ಇಚ್ಛೆಯನ್ನು ದಾಖಲಿಸಿದ ನಂತರ ಏಕ ಸದಸ್ಯ ಪಡಿತರ ಚೀಟಿಗೆ 05 ಕೆ.ಜಿ ಮತ್ತು ಇಬ್ಬರಿಗಿಂತ ಹೆಚ್ಚು ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ ಅಕ್ಕಿಯನ್ನು ಪ್ರತಿ ಕೆ.ಜಿ ಗೆ ರೂ.15/- ರಂತೆ ನವೆಂಬರ್2023 ರ ವರೆಗೂ ಹಂಚಿಕೆ ನೀಡಿದ್ದು, ಇದಕ್ಕಾಗಿ ಅಗತ್ಯವಿದ್ದ ಅಕ್ಕಿ ಪ್ರಮಾಣವನ್ನು OMSS (D) ಯೋಜನೆಯಡಿ ಭಾರತ ಆಹಾರ ನಿಗಮದಿಂದ ಖರೀದಿಸಿ ಹಂಚಿಕೆ ಮಾಡಲಾಗುತ್ತಿತ್ತು. OMSS (D) ಯೋಜನೆ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಆದ್ಯತೇತರ (NPHH) ಪಡಿತರ ಚೀಟಿಗಳಿಗೆ ತಾತ್ಕಾಲಿಕವಾಗಿ ಅಕ್ಕಿ ಹಂಚಿಕೆಯನ್ನು ಸ್ಥಗಿತಗೊಳಿಸಲಾಗಿದೆ. |

ಇ-ಆನಾಸ 78 ಆನಾಸ 2025

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ
ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ
ಇಲಾಖಾ ಸಚಿವರು